**1 ನೇ ಹೆಚ್ಚುವರಿ ಸಿವಿಲ್ ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ಹರಿಹರ**

**ಸಿ ಸಿ ನಂ. 664/2013**

| | | |
|---|---|---|
| ಹೆಸರು | ಚಂದ್ರಶೇಖರ | PW -1 |
| ತಂದೆಯ ಹೆಸರು | ವೆಂಕಟೇಶ | CW -6 |
| ವಯಸ್ಸು | 40 ವರ್ಷ | |
| ಉದ್ಯೋಗ | ಚಾಲಕ | ದಿನಾಂಕಃ 02.09.2025 |
| ವಾಸ | ಹರಿಹರ | |

**ಕಲಂ 299 ಸಿ ಆರ್ ಪಿ ಸಿ ರಡಿಯಲ್ಲಿ ದಾಖಲಿಸಲಾದ ಸಾಕ್ಷಿಯ ಹೇಳಿಕೆ**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತುಃ**

**ಮುಖ್ಯ ವಿಚಾರಣೆ ಸಸಅ ರವರಿಂದ ಃ**

ಚಾಸಾ 5 ರವರ ಪರಿಚಯ ಇದೆ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದು, ಅಮಾನತ್ತು ಪಚಂನಾಮೆಯ ದೃಢೀಕೃತ ನಕಲು ಆಗಿದ್ದು, ಸಾಕ್ಷಿಯು ಅದರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿಪಿ 1 ಎಂದು, ಸಾಕ್ಷಿಯ ಸಹಿಯನ್ನು ನಿಪಿ 1(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು 10 ವರ್ಷಗಳ ಹಿಂದೆ ಹರಿಹರದ ಪೊಲೀಸ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಯಾವ ಕಾರಣಕ್ಕಾಗಿ ಸಹಿ ಮಾಡಿದ್ದೇನೆ ಎಂದು ಗೊತ್ತಿಲ್ಲ. ಸಾಕ್ಷಿಗೆ ಒಂದು ಛಾಯಾಚಿತ್ರವನ್ನು ತೋರಿಸಲಾಗಿ, ಅದರಲ್ಲಿ ತಾನು ಇರುವುದನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 2 ಎಂದು ಗುರುತಿಸಲಾಯಿತು ನಿಪಿ 2 ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಹೇಳಿದ ಮೇರೆಗೆ ಛಾಯಾಚಿತ್ರಕ್ಕೆ ನಿಂತುಕೊಂಡಿರುತ್ತೇನೆ.

ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದು, ಅಮಾನತ್ತು ಪಚಂನಾಮೆಯ ದೃಢೀಕೃತ ನಕಲು ಆಗಿದ್ದು, ಸಾಕ್ಷಿಯು ಅದರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿಪಿ 3 ಎಂದು, ಸಾಕ್ಷಿಯ ಸಹಿಯನ್ನು ನಿಪಿ 3(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು 10 ವರ್ಷಗಳ ಹಿಂದೆ ಹರಿಹರದ ಪೊಲೀಸ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಯಾವ ಕಾರಣಕ್ಕಾಗಿ ಸಹಿ ಮಾಡಿದ್ದೇನೆ ಎಂದು ಗೊತ್ತಿಲ್ಲ. ಸಾಕ್ಷಿಗೆ ಒಂದು ಛಾಯಾಚಿತ್ರವನ್ನು ತೋರಿಸಲಾಗಿ, ಅದರಲ್ಲಿ ತಾನು ಇರುವುದನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 4 ಎಂದು ಗುರುತಿಸಲಾಯಿತು ನಿಪಿ 4 ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಹೇಳಿದ ಮೇರೆಗೆ ಛಾಯಾಚಿತ್ರಕ್ಕೆ ನಿಂತುಕೊಂಡಿರುತ್ತೇನೆ.

ಸಾಕ್ಷಿಗೆ ಮತ್ತೊಂದು ದಾಖಲೆಯನ್ನು ತೋರಿಸಲಾಗಿ ಅದು, ಮಾಲು ಅಮಾನತ್ತು ಪಚಂನಾಮೆಯ ದೃಢೀಕೃತ ನಕಲು ಆಗಿದ್ದು, ಸಾಕ್ಷಿಯು ಅದರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿಪಿ 5 ಎಂದು, ಸಾಕ್ಷಿಯ ಸಹಿಯನ್ನು ನಿಪಿ 5(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು 10 ವರ್ಷಗಳ ಹಿಂದೆ ಹರಿಹರದ ಪೊಲೀಸ

ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಯಾವ ಕಾರಣಕ್ಕಾಗಿ ಸಹಿ ಮಾಡಿದ್ದೇನೆ ಎಂದು ಗೊತ್ತಿಲ್ಲ. ಸಾಕ್ಷಿಗೆ ಒಂದು ಛಾಯಾಚಿತ್ರವನ್ನು ತೋರಿಸಲಾಗಿ, ಅದರಲ್ಲಿ ತಾನು ಇರುವುದನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 6 ಎಂದು ಗುರುತಿಸಲಾಯಿತು ನಿಪಿ 6 ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಹೇಳಿದ ಮೇರೆಗೆ ಛಾಯಾಚಿತ್ರಕ್ಕೆ ನಿಂತುಕೊಂಡಿರುತ್ತೇನೆ.

ಸಾಕ್ಷಿಗೆ ಇನ್ನೊಂದು ದಾಖಲೆಯನ್ನು ತೋರಿಸಲಾಗಿ ಅದು, ಅಮಾನತ್ತು ಪಚಂನಾಮೆಯ ದೃಢೀಕೃತ ನಕಲು ಆಗಿದ್ದು, ಸಾಕ್ಷಿಯು ಅದರಲ್ಲಿನ ತನ್ನ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಅದನ್ನು ನಿಪಿ 7 ಎಂದು, ಸಾಕ್ಷಿಯ ಸಹಿಯನ್ನು ನಿಪಿ 7(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸುಮಾರು 10 ವರ್ಷಗಳ ಹಿಂದೆ ಹರಿಹರದ ಪೊಲೀಸ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ. ಯಾವ ಕಾರಣಕ್ಕಾಗಿ ಸಹಿ ಮಾಡಿದ್ದೇನೆ ಎಂದು ಗೊತ್ತಿಲ್ಲ. ಸಾಕ್ಷಿಗೆ ಒಂದು ಛಾಯಾಚಿತ್ರವನ್ನು ತೋರಿಸಲಾಗಿ, ಅದರಲ್ಲಿ ತಾನು ಇರುವುದನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 8 ಎಂದು ಗುರುತಿಸಲಾಯಿತು ನಿಪಿ 8 ಯಾವ ಕಾರಣಕ್ಕಾಗಿ ತೆಗೆದಿರುತ್ತಾರೆ ಎಂದು ನನಗೆ ಗೊತ್ತಿಲ್ಲ. ಪೊಲೀಸರು ಹೇಳಿದ ಮೇರೆಗೆ ಛಾಯಾಚಿತ್ರಕ್ಕೆ ನಿಂತುಕೊಂಡಿರುತ್ತೇನೆ. ಪೊಲೀಸರು ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿರುವುದಿಲ್ಲ.

(ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎ.ಪಿ.ಪಿ ಯವರು ಕೋರಿದ್ದು, ಸಂಗತಿಗಳನ್ನು ಪರೀಶಿಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟಿ ಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದ ಃ**

ದಿನಾಂಕ 16.02.2013 ರಂದು ಪೊಲೀಸರು ನನ್ನನ್ನು ಮತ್ತು ಚಾಸಾ 5 ರವರನ್ನು ಪಂಚರನ್ನಾಗಿ ಬರಮಾಡಿಕೊಂಡು ಪ್ರಕರಣದ ವಿದ್ಯಮಾನ ತಿಳಿಸಿ, ನಾವುಗಳು ಒಪ್ಪಿದ ಮೇರೆಗೆ, ದಾವಣಗೆರೆ ನಗರದ ಎಸ್ ಎಂ ಕೃಷ್ಣ ನಗರದಲ್ಲಿರುವ ವಿಷ್ಟು ಎಂಬುವವರಿಗೆ ಸೇರಿದ ಮಾಗಡಿ ಹಾಲಮ್ಮ ನಿವಾಸದಲ್ಲಿ ಬಾಡಿಗೆಗೆ ವಾಸವಾಗಿರುವ 1 ನೇ ಆರೋಪಿಯ ಮನೆಯಲ್ಲಿ ಆರೋಪಿತರು ಖೋಟಾ ನೋಟುಗಳ ಪ್ರಕರಣದಲ್ಲಿ ಬೆಳಿಗ್ಗೆ 8.30 ರಿಂದ 11.30 ಗಂಟೆವರೆಗೆ ನಿಪಿ 1 ರಂತೆ ಪಂಚನಾಮಯನ್ನು ಜರುಗಿಸಿ, ನಿಪಿ 2 ರಂತೆ ಛಾಯಾಚಿತ್ರ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆ ಕಾಲಕ್ಕೆ 500 ರೂ. ಮುಖಬೆಲೆಯ 500 ನೋಟುಗಳಿದ್ದು, ಒಟ್ಟು 2,50,000 ರೂ.ಗಳ ಖೋಟಾ ನೋಟುಗಳನ್ನು ಜಪ್ತುಪಡಿಸಿಕೊಂಡರು ಎಂದರೆ ಸರಿಯಲ್ಲ.

ನಂತರ ಅದೇ ದಿನ ಪೊಲೀಸ್ ಠಾಣೆಯ ಅಪರಾಧ ವಿಭಾಗದ ಕಛೇರಿಯಲ್ಲಿ ಮಧ್ಯಾಹ್ನ 4.30 ರಿಂದ 05.30 ಗಂಟೆವರೆಗೆ ನಿಪಿ 3 ರಂತೆ ಪಂಚನಾಮಯನ್ನು ಜರುಗಿಸಿ, ನಿಪಿ 4 ರಂತೆ ಛಾಯಾಚಿತ್ರ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆ ಕಾಲಕ್ಕೆ 500 ರೂ. ಮುಖಬೆಲೆಯ 50 ನೋಟುಗಳಿದ್ದು, ಒಟ್ಟು 25,000 ರೂ.ಗಳ ಖೋಟಾ ನೋಟುಗಳನ್ನು ಮತ್ತು ಒಂದು ನೋಕಿಯಾ ಮೊಬೈಲ್ ಫೋನ್ ನ್ನು ಜಪ್ತುಪಡಿಸಿಕೊಂಡರು ಎಂದರೆ ಸರಿಯಲ್ಲ.

ನಂತರ ದಾವಣಗೆರೆ ನಗರದ ಕೆ ಇ ಬಿ ಸರ್ಕಲ್ ಬಳಿ ಇರುವ ಮುಸ್ಲಿಂ ಹಾಸ್ಟೇಲ್ ಕಾಂಪ್ಲೆಕ್ಸನ ರಚನಾ ಜೂಸ್ ಸೆಂಟರ್ ನಲ್ಲಿ ಮಧ್ಯಾಹ್ನ 1.30 ರಿಂದ 3.00 ಗಂಟೆವರೆಗೆ ನಿಪಿ 5 ರಂತೆ ಪಂಚನಾಮೆಯನ್ನು ಜರುಗಿಸಿ, ನಿಪಿ 6 ರಂತೆ ಛಾಯಾಚಿತ್ರ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆ ಕಾಲಕ್ಕೆ 500 ರೂ. ಮುಖಬೆಲೆಯ 110 ನೋಟುಗಳಿದ್ದು, ಒಟ್ಟು 55,000 ರೂ.ಗಳ ಖೋಟಾ ನೋಟುಗಳನ್ನು ಹಾಗೂ ಎರಡು ಮೊಬೈಲ್ ಫೋನ್‌ಗಳನ್ನು ಜಪ್ತುಪಡಿಸಿಕೊಂಡರು ಎಂದರೆ ಸರಿಯಲ್ಲ.

ನಂತರ ಅದೇ ದಿನ ದಾವಣಗೆರೆ ನಗರದ ಬಾಷಾ ನಗರದಲ್ಲಿರುವ 9 ನೇ ಆರೋಪಿಯ ವಾಸದ ಮನೆಯಲ್ಲಿ ಮಧ್ಯಾಹ್ನ 12.00 ರಿಂದ 1.00 ಗಂಟೆವರೆಗೆ ನಿಪಿ 7 ರಂತೆ ಪಂಚನಾಮೆಯನ್ನು ಜರುಗಿಸಿ, ನಿಪಿ 8 ರಂತೆ ಛಾಯಾಚಿತ್ರ ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಪಂಚನಾಮೆ ಕಾಲಕ್ಕೆ 500 ರೂ. ಮುಖಬೆಲೆಯ 46 ನೋಟುಗಳಿದ್ದು, ಒಟ್ಟು 23,000 ರೂ.ಗಳ ಖೋಟಾ ನೋಟುಗಳನ್ನು ಜಪ್ತುಪಡಿಸಿಕೊಂಡರು ಎಂದರೆ ಸರಿಯಲ್ಲ. ಪ್ರಕರಣದ ಎಲ್ಲ ಮಾಹಿತಿ ಗೊತ್ತಿದ್ದರೂ ಸಹ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲಃ**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನದಂತೆ ಬೆರಳಚ್ಚು ಪಡಿಸಿದೆ)

ಓ ಹೇ ಕೇ ಸರಿ ಇದೆ

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಮ್‌ಎಫ್ ಸಿ ನ್ಯಾ

ಯಾಲಯ, ಹರಿಹರ.